## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 691
ಸದಸ್ಯರ ಹೆಸರು : ಶ್ರೀ ಸುನೀಲ್‌ಗೌಡ ಪಾಟೀಲ್,
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 23.12.2022

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ವಿಜಯಪುರ ನಗರ ಮತ್ತು ಜಿಲ್ಲೆ ಅಂತರಾಷ್ಟ್ರೀಯ ಪ್ರವಾಸಿ ತಾಣಗಳನ್ನು ಹೊಂದಿರುವ ಪ್ರದೇಶವಾಗಿದ್ದು ಸಾವಿರಾರು ಉದ್ಯೋಗಿಗಳು ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿನ್ನೆಲೆಯಲ್ಲಿ ದಿನನಿತ್ಯ ನೂರಾರು ಜನ ಬೆಂಗಳೂರಿಗೆ ಸಂಚರಿಸಲು ಹೈಟೆಕ್ ಬಸ್‌ಗಳ ಸೌಲಭ್ಯವಿಲ್ಲದೇ ತೊಂದರೆ ಅನುಭವಿಸುತ್ತಿರುವುದು ಮತ್ತು ಖಾಸಗಿ ಬಸ್ಸುಗಳ ಮೇಲೆ ಅವಲಂಬಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಪ್ರಯಾಣಿಕರ ತೊಂದರೆ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;<br>(ವಿವರ ನೀಡುವುದು) | ಕ.ಕ.ರ.ಸಾ.ನಿಗಮದ ವಿಜಯಪುರ ವಿಭಾಗದಿಂದ ಪ್ರತಿದಿನ 01 ನಾನ್ ಎ.ಸಿ. ಸ್ಲೀಪರ್ ಹಾಗೂ 02 ವೇಗದೂತ ಸಾರಿಗೆಗಳನ್ನು ವಿಜಯಪುರ-ಬೆಂಗಳೂರು ಮಾರ್ಗದಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದೆ ಹಾಗೂ ಮಹಾರಾಷ್ಟ್ರ ರಾಜ್ಯದ ಒಂದು ಸೀಟರ್-ಕಂ-ಸ್ಲೀಪರ್ ವಾಹನವು ಉಸ್ಮಾನಾಬಾದ್-ಬೆಂಗಳೂರು ಮಾರ್ಗದಲ್ಲಿ ಕಾರ್ಯಾಚರಣೆಯಲ್ಲಿರುತ್ತದೆ. |
| ಆ | ವಿಜಯಪುರದಿಂದ ಬೆಂಗಳೂರು ಹಾಗೂ ಬೆಂಗಳೂರಿನಿಂದ ವಿಜಯಪುರಕ್ಕೆ ಸಂಪರ್ಕ ಕಲ್ಪಿಸಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ಎ.ಸಿ ಮಲ್ಟಿ ಆಕ್ಸಲ್ ವೋಲ್ವೋ ಸ್ಲೀಪರ್ ಬಸ್‌ಗಳ ಸೇವೆಯನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ಈ ಬಸ್‌ಗಳ ಸೇವೆಯನ್ನು ಸಾರ್ವಜನಿಕರಿಗೆ ಒದಗಿಸಲಾಗುವುದು ಹಾಗೂ ಈ ಕುರಿತು ಸರ್ಕಾರದ ಸ್ಪಷ್ಟವಾದ ನಿಲುವೇನು? (ವಿವರ ಒದಗಿಸುವುದು) | ಕ.ರಾ.ರ.ಸಾ.ನಿಗಮದ ಬೆಂಗಳೂರು ಕೇಂದ್ರೀಯ ವಿಭಾಗದ ವತಿಯಿಂದ ಈ ಹಿಂದೆ ಬೆಂಗಳೂರು-ವಿಜಯಪುರ ಮಾರ್ಗದಲ್ಲಿ ಕರೋನಾ ಎ.ಸಿ. ಸ್ಲೀಪರ್ ಸಾರಿಗೆಯನ್ನು ಸೆಪ್ಟೆಂಬರ್-2021 ರಿಂದ ಜುಲೈ-2022ರವರೆಗೆ ಕಾರ್ಯಾಚರಣೆ ಮಾಡಲಾಗಿದ್ದು, ಸದರಿ ಸಾರಿಗೆಗೆ ಸಾರ್ವಜನಿಕ ಪ್ರಯಾಣಿಕರಿಂದ ಉತ್ತೇಜನ ದೊರೆಯದೇ ನಿರಂತರವಾಗಿ ನಷ್ಟದಲ್ಲಿ ಕಾರ್ಯಾಚರಣೆಯಾಗುತ್ತಿದ್ದರಿಂದ, ಸಂಸ್ಥೆಯ ಆರ್ಥಿಕ ಹಿತದೃಷ್ಟಿಯಿಂದ ದಿನಾಂಕ: 26.07.2022ರಿಂದ ಜಾರಿಗೆ ಬರುವಂತೆ ಸದರಿ ಸಾರಿಗೆಯನ್ನು ರದ್ದುಪಡಿಸಲಾಗಿದೆ.<br><br>ನಿಗಮದ ಆರ್ಥಿಕ ಪರಿಸ್ಥಿತಿ ಸುಧಾರಿಸಿದ ನಂತರ ಮುಂದಿನ ದಿನಗಳಲ್ಲಿ ಎ.ಸಿ. ಸ್ಲೀಪರ್ |



Generated from eOffice by B SREERAMULU, TD-MIN(BS), TRANSPORT MINISTER, Trans on 17/12/2022 02.19 PM

| | | |
|---|---|---|
| | | ಸಾರಿಗೆಯನ್ನು ಪುನರಾರಂಭಿಸುವ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಲಾಗುವುದು. |

ಸಂಖ್ಯೆ: ಟಿಡಿ 281 ಟಿಸಿಕ್ಯೂ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು